ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಬೀದರ್ ಜಿಲ್ಲೆಯ ಹಿಂದುಳಿದ ವರ್ಗಗಳ ಜಾತಿಗೆ ಸೇರಿದ ಅಲೆಮಾರಿ ಜನಾಂಗದ ಅಭಿವೃದ್ಧಿ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):-

743 (895) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ಔರಾದ, ಬಸವಕಲ್ಯಾಣ, ಭಾಲ್ಕಿ,

ಹುಮನಾಬಾದ್ ತಾಲ್ಲೂಕುಗಳಲ್ಲಿ ಹೆಚ್ಚಿನ ಸಂಖ್ಯೆಯ ಅಲೆಮಾರಿ ಜನಾಂಗವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಜನಾಂಗದ ಮೂಲಭೂತ ಸೌಕರ್ಯಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಈ ಜನರಿಗಾಗಿ ವಸತಿ ಸೌಲಭ್ಯ ಒದಗಿಸುವುದು ಸರ್ಕಾರದ ಧ್ಯೇಯವಾಗಿದ್ದು, ಇಲ್ಲಿಯವರೆಗೆ ಅವರ ಅಭಿವೃದ್ಧಿಗೆ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣವೇನು ; ಇದಕ್ಕೆ ಯಾರು ಹೊಣೆಗಾರರು ?

(ಇ) ಕ್ವಾರೆಂಟೆನ್ ಕೇಂದ್ರಗಳೆಷ್ಟು ; ಅವುಗಳಲ್ಲಿ ಎಷ್ಟು ಜನ ಚಿಕಿತ್ಸೆ ಪಡೆದಿದ್ದಾರೆ ಹಾಗೂ ಅವರಿಗೆ ಎಷ್ಟು ಹಣ ಖರ್ಚು ಮಾಡಲಾಗಿದೆ? (ಮಾಹಿತಿ ನೀಡುವುದು)